ದೂರವಾಣಿ / ಫ್ಯಾಕ್ಸ್ : 080-2793 4470
080-2793 5412

URL : www.hoskote-pa.in
e-mail : hosakote.pa@gmail.com

# ಹೊಸಕೋಟೆ ಯೋಜನಾ ಪ್ರಾಧಿಕಾರ

ಮಿಷನ್ ಹಾಸ್ಪಿಟಲ್ ರಸ್ತೆ, 1ನೇ ಅಡ್ಡರಸ್ತೆ, ಶ್ರೀ ವೆಂಕಟಾದ್ರಿ, ಬಡಾವಣೆ, ಹೊಸಕೋಟೆ - 562 114, ಬೆಂಗಳೂರು (ಗ್ರಾ) ಜಿಲ್ಲೆ.

ಸಂಖ್ಯೆ: ಹೊಯೋಪ್ರಾ/ಸಿ.ಸಿ./32/2019–20 ದಿನಾಂಕ: 09.08.2019

## ಪ್ರಾರಂಭಿಕ ಪ್ರಮಾಣ ಪತ್ರ

**ವಿಷಯ** : ಹೊಸಕೋಟೆ ತಾಲ್ಲೂಕು, ಕಸಬಾ ಹೋಬಳಿ, ವರದಾಪುರ ಗ್ರಾಮದ ಸ. ನಂ. 1/2 ರಲ್ಲಿನ 38 1/2 ಗುಂಟೆ ಹಾಗೂ ಕಣ್ಣೂರಹಳ್ಳಿ ಗ್ರಾಮದ ಸ.ನಂ. 127/6 ರಲ್ಲಿನ 16 1/2 ಗುಂಟೆ, ಸ.ನಂ. 127/7 ರಲ್ಲಿನ 33 1/4 ಗುಂಟೆ ಮತ್ತಿತರೆ ಒಟ್ಟು 09 ಎಕರೆ 36 1/2 ಗುಂಟೆ ವಿಸ್ತೀರ್ಣ (ಹೊಯೋಪ್ರಾ /ಎಲ್.ಎ.ಓ/04/2012–13, ದಿನಾಂಕ: 13.08.2012 ರ ಪತ್ರದಲ್ಲಿ ಅನುಮೋದಿಸಿ ಶೇ. 100 ರಷ್ಟು ನಿವೇಶನಗಳನ್ನು ಬಿಡುಗಡೆ ಮಾಡಲಾದ ವಸತಿ ಬಡಾವಣೆ) ನಿವೇಶನ ಸಂಖ್ಯೆ: 93 ಮತ್ತು 94 (ಒಟ್ಟು ವಿಸ್ತೀರ್ಣ 643.15 ಚ.ಮಿ.) ಗಳನ್ನು ಒಂದು ಗೂಡಿಸಿರುವ (Amalgamation) ನಿವೇಶನದಲ್ಲಿ ಪ್ರಸ್ತಾಪಿತ ವಸತಿ ಸಮುಚ್ಚಯ (Apartment) ವಸತಿ ಕಟ್ಟಡ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿಯ ಮಂಜೂರಾತಿ ಆದೇಶ ಸಂಖ್ಯೆ: ಹೊಯೋಪ್ರಾ/ಎಲ್.ಎ.ಓ/12/2012–13, ದಿನಾಂಕ: 13.08.2012.
2. ಈ ಕಛೇರಿ ಮಂಜೂರಾತಿ ಆದೇಶ ಸಂಖ್ಯೆ: ಹೊಯೋಪ್ರಾ/ಎಲ್.ಎ.ಒ./Amalg/03/2015–16, ದಿನಾಂಕ: 04.07.2016.
3. ಪೌರಾಯುಕ್ತರು, ನಗರಸಭೆ, ಹೊಸಕೋಟೆ ರವರ ಪತ್ರ ಸಂಖ್ಯೆ: ನ.ಸ.ಹೊ/ಕಂದಾಯ ಶಾಖೆ/ ಸಿ.ಆರ್/21/2019–20, ದಿನಾಂಕ: 18.07.2019.
4. ಈ ಕಛೇರಿ ಸಮ ಸಂಖ್ಯೆ ತಿಳುವಳಿಕೆ ಪತ್ರ ದಿನಾಂಕ: 06.08.2019.
5. ಅರ್ಜಿದಾರರು ಪ್ರಾಧಿಕಾರಕ್ಕೆ ಶುಲ್ಕ ಪಾವತಿಸಿದ ಕುರಿತು ಮನವಿ ದಿನಾಂಕ: 08.08.2019 ರೊಂದಿಗೆ Corporation Bank, Hoskote-1142 ರಲ್ಲಿನ ಡಿ.ಡಿ.ನಂ. 246726, ದಿನಾಂಕ: 08.08.2019, ರೂ. 64,500/–.

**ಪ್ರಸ್ತಾವನೆ**

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಈ ಪ್ರಾಧಿಕಾರದ "ಮಂಜೂರಾತಿ ಆದೇಶ" ದಲ್ಲಿ ಹೊಸಕೋಟೆ ತಾಲ್ಲೂಕು, ಕಸಬಾ ಹೋಬಳಿ, ವರದಾಪುರ ಗ್ರಾಮದ ಸ. ನಂ. 1/2 ರಲ್ಲಿನ 38 1/2 ಗುಂಟೆ ಹಾಗೂ ಕಣ್ಣೂರಹಳ್ಳಿ ಗ್ರಾಮದ ಸ.ನಂ. 127/6 ರಲ್ಲಿನ 16 1/2 ಗುಂಟೆ, ಸ.ನಂ. 127/7 ರಲ್ಲಿನ 33 1/4 ಗುಂಟೆ ಮತ್ತಿತರೆ ಒಟ್ಟು 09 ಎಕರೆ 36 1/2 ಗುಂಟೆ ಜಮೀನಿಗೆ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲಾಗಿದೆ. ಉಲ್ಲೇಖ (2) ರ "ಮಂಜೂರಾತಿ ಆದೇಶ" ದಲ್ಲಿ ಪ್ರಸ್ತಾಪಿತ ವಿನ್ಯಾಸದಲ್ಲಿನ ನಿವೇಶನ ಸಂ: 93 ಮತ್ತು 94 ರ ಗಳನ್ನು ಒಂದುಗೂಡಿಸಿ (Amalgamation) ಅನುಮೋದನೆ ನೀಡಲಾಗಿರುತ್ತದೆ. ಉಲ್ಲೇಖ (3) ರಲ್ಲಿ 2 ನಿವೇಶನಗಳನ್ನು ಒಂದುಗೂಡಿಸಲಾದ ನಿವೇಶನದಲ್ಲಿ ವಸತಿ ಉಪಯೋಗದ ಬಹುಮಹಡಿ ಕಟ್ಟಡಕ್ಕೆ ಸ್ಟಿಲ್ಟ್ + ನೆಲ ಮತ್ತು 3 ಮೇಲು ಅಂತಸ್ತಿನ (Stilt+ G+3 Floors) ಒಟ್ಟು 16 ವಸತಿ ಘಟಕಗಳನ್ನು ಕಟ್ಟಲು ಹೊಸಕೋಟೆ ನಗರಸಭೆ ವ್ಯಾಪ್ತಿಯ ಖಾತಾ ಸಂಖ್ಯೆ: 14073/1111/127/6/93 ಮತ್ತು 14074/1111/127/6/94 ರಲ್ಲಿ ವಸತಿ ಕಟ್ಟಡ ನಕ್ಷೆಗೆ ಅನುಮೋದನೆ ಕೋರಿ ನಕ್ಷೆಗಳೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ.

ಉಲ್ಲೇಖ (4) ರಂತೆ ಸಂಬಂಧಿಸಿದ ಶುಲ್ಕವನ್ನು ಪಾವತಿಸಲು ಅರ್ಜಿದಾರರಿಗೆ ತಿಳಿಸಲಾಗಿದ್ದು ಅದರಂತೆ, ಅರ್ಜಿದಾರರು ಉಲ್ಲೇಖ (5) ರಲ್ಲಿ ಈ ಪ್ರಾಧಿಕಾರಕ್ಕೆ ಅನುಮೋದನೆ ಸಂಬಂಧ ಶುಲ್ಕ ಪಾವತಿಸಿರುತ್ತಾರೆ.

ಸದರಿ ಜಮೀನಿಗೆ ಅನುಮೋದಿತ ವಸತಿ ವಿನ್ಯಾಸದಲ್ಲಿನ 12 ಮೀ. ಅಗಲದ ರಸ್ತೆಯಿಂದ ಸಂಪರ್ಕವಿರುತ್ತದೆ. ಸಲ್ಲಿಸಲಾದ ಕಟ್ಟಡ ನಕ್ಷೆಗಳು ಅನುಮೋದಿತ ವಲಯ ನಿಯಮಾವಳಿಗಳಿಗೆ ಅನುಗುಣವಾಗಿರುತ್ತದೆ.

ಆದ್ದರಿಂದ, ಮೇಲೆ ವಿವರಿಸಿರುವ ಅಂಶಗಳ ಮೇರೆಗೆ ವಸತಿ ಕಟ್ಟಡ ನಕ್ಷೆಗೆ ತಾಂತ್ರಿಕ ಅನುಮೋದನೆ ನೀಡುವ ಸಂಬಂಧ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಆದೇಶ ಸಂಖ್ಯೆ: ಹೊಯೋಪ್ರಾ/ಸಿ.ಸಿ./32/2019-20, ದಿನಾಂಕ : 09.08.2019**

ಹೊಸಕೋಟೆ ತಾಲ್ಲೂಕು, ಕಸಬಾ ಹೋಬಳಿ, ವರದಾಪುರ ಗ್ರಾಮದ ಸ. ನಂ. 1/2 ರಲ್ಲಿನ 38 1/2 ಗುಂಟೆ ಹಾಗೂ ಕಣ್ಣೂರಹಳ್ಳಿ ಗ್ರಾಮದ ಸ.ನಂ. 127/6 ರಲ್ಲಿನ 16 1/2 ಗುಂಟೆ, ಸ.ನಂ. 127/7 ರಲ್ಲಿನ 33 1/4 ಗುಂಟೆ ಮತ್ತಿತರೆ ಒಟ್ಟು 09 ಎಕರೆ 36 1/2 ಗುಂಟೆ ವಿಸ್ತೀರ್ಣ (ಹೊಯೋಪ್ರಾ/ಎಲ್.ಎ.ಓ/04/2012-13, ದಿನಾಂಕ: 13.08.2012 ರ ಪತ್ರದಲ್ಲಿ ಅನುಮೋದಿಸಿ ಶೇ. 60 ರಷ್ಟು ನಿವೇಶನಗಳನ್ನು ಬಿಡುಗಡೆ ಮಾಡಲಾದ ವಸತಿ ಬಡಾವಣೆ) ನಿವೇಶನ ಸಂಖ್ಯೆ: 93 ಮತ್ತು 94 (ಒಟ್ಟು ವಿಸ್ತೀರ್ಣ 643.15 ಚ.ಮಿ.) ಗಳನ್ನು ಒಂದು ಗೂಡಿಸಿರುವ (Amalgamation) ನಿವೇಶನದಲ್ಲಿ ಸ್ಟಿಲ್ಟ್ + ನೆಲ ಮತ್ತು 3 ಮೇಲು ಅಂತಸ್ತಿನ (Stilt+ G+3 Floors) ಕಟ್ಟಡದಲ್ಲಿ ಒಟ್ಟು 16 ವಸತಿ ಘಟಕಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 15 ರನ್ವಯ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಕಾರ್ಯರೂಪಕ್ಕೆ ತರಲು ತಾಂತ್ರಿಕ ಅನುಮೋದನೆ ನೀಡಲಾಗಿದೆ.

**ಷರತ್ತುಗಳು:**

1. ಈಗ ನೀಡಿರುವ ಕಟ್ಟಡ ನಕ್ಷೆ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ ಎರಡು ವರ್ಷಗಳವರೆಗೆ ಮಾತ್ರ ಅಂದರೆ ದಿನಾಂಕ: 09.08.2019 ರಿಂದ ದಿನಾಂಕ: 08.08.2021 ರವರೆಗೆ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ಕಟ್ಟಡ ಅಭಿವೃದ್ಧಿ ಕಾರ್ಯ ಪೂರ್ಣಗೊಳ್ಳದಿದ್ದಲ್ಲಿ, ಅನುಮತಿಯನ್ನು ನವೀಕರಿಸಿಕೊಳ್ಳತಕ್ಕದ್ದು.
2. ಅನುಮೋದಿತ ವಸತಿ ವಿನ್ಯಾಸದಲ್ಲಿನ ಎರಡು ನಿವೇಶನಗಳನ್ನು ಒಂದುಗೂಡಿಸಿ (Amalgamation) ಅನುಮೋದಿಸಿದ ನಿವೇಶನದಲ್ಲಿ ಪ್ರಸ್ತಾಪಿಸಲಾದ ವಸತಿ ಕಟ್ಟಡ ನಕ್ಷೆಗೆ ಅನುಗುಣವಾಗಿ ಹಾಗೂ ಈ ಪ್ರಾಧಿಕಾರದಿಂದ ನೀಡಲಾದ ಅನುಮೋದನೆಯಂತೆ ಕಟ್ಟಡವನ್ನು ನಿರ್ಮಿಸತಕ್ಕದ್ದು. ಕಟ್ಟಡ ಕಾಮಗಾರಿ ಪೂರ್ಣಗೊಂಡ ನಂತರ ಈ ಕಛೇರಿಗೆ ಮಾಹಿತಿ ನೀಡತಕ್ಕದ್ದು.
3. ಸದರಿ ಜಮೀನಿನಲ್ಲಿ ಪ್ರಸ್ತಾಪಿಸಿರುವ ಕಟ್ಟಡಗಳ ನಿರ್ಮಾಣ ಸಂಬಂಧ ದಿನಾಂಕ: 06.08.2019 ರಂದು ಸಲ್ಲಿಸಿರುವ ಮೆ|| ಸಾಯಿರಾಮ್ ಇಂಜಿನಿಯರ್ಸ್, ಬೆಂಗಳೂರು ರವರ ಸ್ಥಿರತೆ ಪ್ರಮಾಣ ಪತ್ರ (Structural Stability Certificate) ದಲ್ಲಿ ತಿಳಿಸಿರುವಂತೆ ಅವರ ಮೇಲ್ವಿಚಾರಣೆಯಲ್ಲಿ ಹಾಗೂ ನಿಯಮಗಳಂತೆ ಕಟ್ಟಡಗಳನ್ನು ನಿರ್ಮಿಸತಕ್ಕದ್ದು ಹಾಗೂ ಸದರಿ ಕಟ್ಟಡದ ಗುಣಮಟ್ಟಕ್ಕೆ ಅರ್ಜಿದಾರರು/ಅಭಿವೃದ್ಧಿದಾರರೇ ಹೊಣೆಗಾರರಾಗಿರುತ್ತಾರೆ.
4. ನಿವೇಶನದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯಾದ ಹೊಸಕೋಟೆ ನಗರಸಭೆ ವತಿಯಿಂದ ಪರವಾನಗಿ ಪಡೆಯತಕ್ಕದ್ದು.
5. ಇತರೇ ಇಲಾಖೆಗಳಿಂದ ಪಡೆದಿರುವ ನಿರಾಕ್ಷೇಪಣಾ ಪತ್ರಗಳಲ್ಲಿನ ನಿಬಂಧನೆ/ಷರತ್ತು ಹಾಗೂ ಇತರೇ ಅಂಶಗಳನ್ನು ತಪ್ಪದೇ ಪಾಲಿಸತಕ್ಕದ್ದು.
6. ಈ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಕಟ್ಟಡ ನಕ್ಷೆಯಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು.
7. ಈ ನಿವೇಶನದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಹಾಗೂ ಹೊಸ ಸಸ್ಯಗಳನ್ನು ಬೆಳೆಸುವುದು.
8. ಸೋಲಾರ್ ವಾಟರ್ ಹೀಟರ್ ಅನ್ನು ಕಟ್ಟಡಗಳಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.

ದೂರವಾಣಿ / ಫ್ಯಾಕ್ಸ್ : 080-2793 4470
080-2793 5412
URL : www.hoskote-pa.in
e-mail : hosakote.pa@gmail.com

# ಹೊಸಕೋಟೆ ಯೋಜನಾ ಪ್ರಾಧಿಕಾರ

ಮಿಷನ್ ಹಾಸ್ಪಿಟಲ್ ರಸ್ತೆ, 1ನೇ ಅಡ್ಡರಸ್ತೆ, ಶ್ರೀ ವೆಂಕಟಾದ್ರಿ, ಬಡಾವಣೆ, ಹೊಸಕೋಟೆ - 562 114, ಬೆಂಗಳೂರು (ಗ್ರಾ) ಜಿಲ್ಲೆ.

ಸಂಖ್ಯೆ: ಹೊಯೋಪ್ರಾ/ಸಿ.ಸಿ./32/2019-20

ದಿನಾಂಕ: 09.08.2019

9. ಸದರಿ ನಿವೇಶನದಲ್ಲಿ ಮಳೆ ನೀರು ಸಂಗ್ರಹಣೆಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ಅಂತರ್ ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
10. ಕಟ್ಟಡದ ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ಬಳಸುವುದನ್ನು ನಿಷೇಧಿಸಲಾಗಿದೆ ಹಾಗೂ ಕಾರ್ಮಿಕ ಇಲಾಖೆಯ ಆದೇಶಾನುಸಾರ ವಿಧಿಸಿರುವ ಎಲ್ಲಾ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು. ಮತ್ತು ಕಟ್ಟಡ ಕಾಮಗಾರಿ ಕಾರ್ಮಿಕರಿಗೆ ಕಟ್ಟಡ ಕಾಮಗಾರಿಯ ಸಂದರ್ಭದಲ್ಲಿ ಅಗತ್ಯ ಸೌಕರ್ಯಗಳನ್ನು ಒದಗಿಸತಕ್ಕದ್ದು.
11. ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ರಸ್ತೆ, ಪಾದಚಾರಿ ಮಾರ್ಗಗಳಲ್ಲಿ ಶೇಖರಣೆ ಮಾಡಬಾರದು.
12. ಕಟ್ಟಡ ನಡು ಜಾಗ ಪ್ರದೇಶದ ಅಂಚಿನಲ್ಲಿ ಗಿಡ ಮರಗಳನ್ನು ಬೆಳಸತಕ್ಕದ್ದು.
13. ಒಂದು ಅನುಮೋದಿತ ಕಟ್ಟಡ ನಕ್ಷೆಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಧಿಕಾರಿಗಳ ಸಮೀಕ್ಷೆಗಾಗಿ ಪ್ರದರ್ಶಿಸತಕ್ಕದ್ದು.
14. ಸದರಿ ಪ್ರಸ್ತಾಪಿತ ಜಮೀನಿನಲ್ಲಿ ಹೊಸಕೋಟೆ ಯೋಜನಾ ಪ್ರಾಧಿಕಾರ/ಇತರೆ ಸರ್ಕಾರಿ ಇಲಾಖೆಗಳ ಜಮೀನುಗಳು/ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಹಾಗೂ ಖರಾಬು ಜಮೀನುಗಳ ಅಳತೆಗಳು ಮತ್ತು ಅವುಗಳ ವಾಸ್ತವಿಕ ಸ್ಥಳಗಳ ವ್ಯತ್ಯಾಸ ಕಂಡುಬಂದಂತಹ ಸಂದರ್ಭದಲ್ಲಿ ಹೊಸಕೋಟೆ ಯೋಜನಾ ಪ್ರಾಧಿಕಾರವು ಅನುಮೋದಿತ ವಸತಿ ಉದ್ದೇಶದ ಏಕ ನಿವೇಶನ ನಕ್ಷೆಯನ್ನು/ಕಟ್ಟಡ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಸಂಪೂರ್ಣ ಅಧಿಕಾರ ಹೊಂದಿರುತ್ತದೆ.
15. ಈ ಅನುಮೋದನೆಯು ತಾಂತ್ರಿಕವಾಗಿರುವುದರಿಂದ ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸಲು ಬರುವುದಿಲ್ಲ.
16. ಸದರಿ ಜಮೀನಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.
17. ಸದರಿ ಕಟ್ಟಡದಲ್ಲಿ ವಿಕಲಚೇತನ ಸ್ನೇಹಿ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳುವುದು.
18. ನೈಸರ್ಗಿಕವಾಗಿ ಹರಿಯುವ ನದಿ/ ಹಳ್ಳ /ಕೆರೆ ಮುಂತಾದವುಗಳಿಗೆ ಯಾವುದೇ ಮಲಿನ ನೀರನ್ನು ಬಿಡಬಾರದು.
19. ಶೌಚಕ್ಕೆ ಬಳಸುವ ತ್ಯಾಜ್ಯ ನೀರನ್ನು "ನಗರ ಮರುಬಳಕೆ ಮಾನದಂಡ" ದಂತೆ ಬಳಸುವುದು.
20. ಸಂಸ್ಕರಿತ ತ್ಯಾಜ್ಯ ನೀರನ್ನು ನಿವೇಶನದಲ್ಲಿನ ಉದ್ಯಾನವನ ಮತ್ತು ಶೌಚಕ್ಕೆ ಬಳಸುವುದು.
21. ಎಸ್.ಟಿ.ಪಿ. ಯಲ್ಲಿ ವಾಸನೆ ನಿಯಂತ್ರಿಸುವ ವ್ಯವಸ್ಥೆಯನ್ನು ಅಳವಡಿಸುವುದು.
22. ಕಟ್ಟಡ ಕಾರ್ಮಿಕರು ಆದಷ್ಟು ಕಡಿಮೆ ಹೊಗೆ ಹೊರಸೂಸುವ ಉತ್ತಮ ತಾಂತ್ರಿಕತೆಯನ್ನು ಬಳಸುವುದು.
23. ಸರ್ಕಾರದ ನಿರ್ದೇಶನದ ಮೇರೆಗೆ ಇನ್ನಾವುದೇ ಶುಲ್ಕಗಳನ್ನು ತುಂಬಲು ಪ್ರಾಧಿಕಾರವು ಸೂಚನೆ ನೀಡಿದಲ್ಲಿ ಅರ್ಜಿದಾರರು ಅಂತಹ ಶುಲ್ಕವನ್ನು ಪ್ರಾಧಿಕಾರಕ್ಕೆ ಪಾವತಿಸತಕ್ಕದ್ದು.
24. **ಈ ಅನುಮೋದಿತ ವಸತಿ ಕಟ್ಟಡ ನಕ್ಷೆಯನ್ನು ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ಬೆಂಗಳೂರು (ರೇರಾ) ರವರಲ್ಲಿ ನೋಂದಣಿ ಮಾಡಿಸುವುದು ಕಡ್ಡಾಯವಾಗಿರುತ್ತದೆ ಹಾಗೂ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, (ರೇರಾ), ಕರ್ನಾಟಕ ರವರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.**
25. ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ವಿಧಿ 15 ರಂತೆ ಕ್ರಮ ಕೈಗೊಳ್ಳಲು ಪ್ರಾಧಿಕಾರಕ್ಕೆ ಅವಕಾಶ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.
26. ಪ್ರಾಧಿಕಾರವು ವಿಧಿಸುವ ಇನ್ನಾವುದೇ ಷರತ್ತುಗಳಿಗೆ ಬದ್ಧವಾಗಿರತಕ್ಕದ್ದು.

27. ಮೇಲ್ಕಂಡ ಯಾವುದೇ ಷರತ್ತುಗಳನ್ನು ಮತ್ತು ಇತರೆ ಯಾವುದೇ ಪ್ರಾಧಿಕಾರವು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.

28. **ಅರ್ಜಿದಾರರು ಸಲ್ಲಿಸಿರುವ ದಾಖಲಾತಿಗಳನ್ವಯ ಈ ಅನುಮತಿಯನ್ನು ನೀಡಲಾಗಿದ್ದು, ವಸತಿ ಕಟ್ಟಡ ನಕ್ಷೆಗೆ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ವಸತಿ ಕಟ್ಟಡ ನಕ್ಷೆಗೆ ನೀಡಿರುವ ಅಂಗೀಕಾರ ತಾನಾಗಿಯೇ ರದ್ದುಗೊಳ್ಳುತ್ತದೆ.**

ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು,
ಹಾಗೂ ಸದಸ್ಯ ಕಾರ್ಯದರ್ಶಿ, ಹೊಸಕೋಟೆ ಯೋಜನಾ ಪ್ರಾಧಿಕಾರ,
ಹೊಸಕೋಟೆ.

<u>ಪ್ರತಿಯನ್ನು</u> :

1. ಪೌರಾಯುಕ್ತರು, ನಗರಸಭೆ, ಹೊಸಕೋಟೆ ತಾಲ್ಲೂಕು. } ಇವರಿಗೆ ಕಟ್ಟಡ ನಕ್ಷೆಯ ನಾಲ್ಕು ಪ್ರತಿಗಳೊಂದಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.

2. ಶ್ರೀ ಡಿ. ಮಂಜುನಾಥ ಬಿನ್ ದಾಸರಪ್ಪ; ಶ್ರೀಮತಿ ಬಿ. ಸವಿತ ಕೋಂ ಹೆಚ್.ವಿ. ಸುರೇಶ್ ಮತ್ತು ಶ್ರೀಮತಿ ಸಂಧ್ಯಾ ನಟರಾಜ್ ಕೋಂ ನಟರಾಜ್ ಹೆಚ್., ಇವರ ಪರವಾಗಿ ಜಿ.ಪಿ.ಎ ದಾರರಾದ ಮೆ॥ ರಿಕ್ವಿಜಾ ಎಸ್ಟೇಟ್ಸ್ ಪ್ರೈ ಲಿ., ನಿರ್ದೇಶಕರುಗಳಾದ ಶ್ರೀ ಕೆ. ಮಹೇಶ್, ಶ್ರೀ ಪ್ರಶಾಂತ್ ವಿ. ನಾಯಕ್ ಮತ್ತು ಶ್ರೀ ಸಿ.ಎಸ್. ವ್ಯಾಸರಾಜ್, ನಂ. 2559, 3ನೇ ಮಹಡಿ, ಜೆ.ಸಿ. ವೃತ್ತ, ಕೆ.ಆರ್. ರಸ್ತೆ, ಹೊಸಕೋಟೆ-562 114 ರವರ ಮಾಹಿತಿಗಾಗಿ ಕಳುಹಿಸಿದೆ.